# ಗಾದೆಗಳ ಗುಡಾಣ


## (365 ಕನ್ನಡ ಜನಪ್ರಿಯ ಗಾದೆಗಳ ಸರಮಾಲೆ)

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ರವರ ಜನ್ಮದಿನದ ಪ್ರಯುಕ್ತ
ಇಂದು ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನು
ಸಂಭ್ರಮ ಮತ್ತು ಸಡಗರದಿಂದ ಆಚರಿಸಲಾಗುತ್ತಿದೆ.
ಕೈ ಹಿಡಿದು ಅಕ್ಷರ ಕಲಿಸಿ,
ನಮ್ಮ ಬದುಕಿಗೆ ಹೊಸ ಅರ್ಥವನ್ನು ನೀಡಿ,
ಮಾರ್ಗದರ್ಶನ ಮಾಡಿದ
ಎಲ್ಲಾ ಗುರುಸಮಾನರ ಪಾದಾರವಿಂದಗಳಿಗೆ
ಈ ಇ-ಕೃತಿ ಸಮರ್ಪಣೆ


## ಪ್ರಗತಿ

(ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆಯ
ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಒಕ್ಕೂಟ)
ಮಲ್ಲೇಶ್ವರಂ, ಬೆಂಗಳೂರು

# ಅರ್ಪಣೆ



ಬೆಂಗಳೂರಿನ ಮಲ್ಲೇಶ್ವರಂ ನಲ್ಲಿರುವ
ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆಯ
ವಿದ್ಯಾರ್ಥಿ–ವಿದ್ಯಾರ್ಥಿನಿಯರ ಒಕ್ಕೂಟದವರು
ಹೊರತಂದ

**‘ಗಾದೆಗಳ ಗುಡಾಣ’**

**ಇ–ಹೊತ್ತಿಗೆ**

ನಮ್ಮ ಬ್ಯಾಂಕಿನ ಸಂಸ್ಥಾಪಕರಾದ
ಶ್ರೀ ಅಮ್ಮೆಂಬಳ್ ಸುಬ್ಬರಾವ್ ಪೈರವರ
ಚರಣಕಮಲಗಳಿಗೆ ಅರ್ಪಿತ



**ಎ ಮಣಿಮೇಖಲೈ,**

**ಕಾರ್ಯನಿರ್ವಾಹಕ ನಿರ್ದೇಶಕಿ, ಕೆನರಾ ಬ್ಯಾಂಕ್**

## ಗ್ರಾಮೀಣ ಜನತೆಗೆ ಕೆನರಾ ಬ್ಯಾಂಕಿನ ಉಪಕ್ರಮಗಳು

ಕೆನರಾ ಬ್ಯಾಂಕ್ ತನ್ನ ಸಾಂಸ್ಥಿಕ ಸಾಮಾಜಿಕ ಜವಾಬ್ದಾರಿಯಡಿ ಸಮಾಜದ ಅಲ್ಪ ಸೌಲಭ್ಯಪ್ರಾಪ್ತರ ಏಳಿಗೆಗಾಗಿ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ. ವಿಶೇಷತ: ಬಡತನ ರೇಖೆಯ ಕೆಳಗಡೆಯಿರುವ ಗ್ರಾಮೀಣ ಜನತೆಯ ಏಳಿಗೆಗಾಗಿ ಬ್ಯಾಂಕ್ ತನ್ನ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಗಳ ಮೂಲಕ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡುತ್ತಿರುವುದಲ್ಲದೆ, ತನ್ನ ವಿತ್ತೀಯ ಸಾಕ್ಷರತಾ ಕೇಂದ್ರಗಳ ಮೂಲಕ ದೇಶಾದ್ಯಂತ ವಿತ್ತೀಯ ಸಾಕ್ಷರತಾ ಜಾಗ್ರತಿಯನ್ನು ಮೂಡಿಸುತ್ತಿದೆ.

(ಕೆನರಾಬ್ಯಾಂಕ್, 250 ಅತ್ಯಂತ ಕಡುಬಡವ ಹೃದ್ರೋಗಿಗಳ ಚಿಕಿತ್ಸೆಗೆ ರೂ.25,97,500 ರೂಗಳ ಆರ್ಥಿಕ ನೆರವು ಮತ್ತು ಐದು ವ್ಹೀಲ್ ಚೇರ್‌ಗಳನ್ನು, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಗೆ ಹಸ್ತಾಂತರಿಸಿ, ಮಾತಾನಾಡುತ್ತಾ)

## ಕಲಿಕೆಗೆ ವಯಸ್ಸಿನ ಮಿತಿಯಿಲ್ಲ

ಕಲಿಕೆಗೆ ವಯಸ್ಸಿನ ಮಿತಿಯಿಲ್ಲ. ಮಾಹಿತಿ ತಂತ್ರಜ್ಞಾನದ ಅರಿವು ಮೂಡಿದರೆ ಮನೆಯಿಂದಲೇ ಹಲವು ಕಾರ್ಯಕ್ರಮಗಳನ್ನು ಮಾಡಿಕೊಳ್ಳಬಹುದು. ಅಲ್ಲದೆ ಕುಟುಂಬ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ನಿರ್ವಹಿಸುವ ಮಹಿಳೆ ವಿದ್ಯಾವಂತಳಾದರೆ ಕುಟುಂಬವೇ ಅದರ ಯೋಜನೆಯನ್ನು ಪಡೆಯುತ್ತದೆ.

(ಬೆಂಗಳೂರಿನ ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ ಮಹಿಳಾ ಉದ್ಯಮಿ ಮತ್ತು ಗೃಹಿಣಿಯರಿಗೆ ಉಚಿತ ಕಂಪ್ಯೂಟರ್ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ)

## ನಿರುದ್ಯೋಗ ಸಮಸ್ಯೆಗೆ ಸ್ವಯಂ-ಉದ್ಯೋಗವೇ ಸೂಕ್ತ

ದೇಶವನ್ನು ಕಾಡುತ್ತಿರುವ ನಿರುದ್ಯೋಗ ಸಮಸ್ಯೆಗೆ ಸ್ವಯಂ ಉದ್ಯೋಗವೇ ಸೂಕ್ತ ಪರಿಹಾರ. ಶಿಸ್ತು, ಶ್ರದ್ಧೆ ಮತ್ತು ಸಮಯಪ್ರಜ್ಞೆಯಿಂದ ಸ್ವ-ಉದ್ಯೋಗ ನಿರ್ವಹಿಸಿದರೆ ಆರ್ಥಿಕ ಪ್ರಗತಿ ಸಾಧ್ಯ. ಜತೆಗೆ ಉದ್ಯೋಗಗಳನ್ನು ಸೃಷ್ಟಿಸಿ, ನಿರುದ್ಯೋಗಿಗಳಿಗೂ ಆಸರೆಯಾಗಬಹುದು.

(ಜೋಗರದೊಡ್ಡಿಯ ಕೆನರಾ ಬ್ಯಾಂಕ್ ಕೆಪಿಜೆ ಪ್ರಭು ಕರಕುಶಲ ತರಬೇತಿ ಸಂಸ್ಥೆಗೆ ಭೇಟಿ ನೀಡಿದಾಗ, ಅಲ್ಲಿನ ಕರಕುಶಲ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ)

# ಗಾದೆಗಳ ಗುಡಾಣ

## (365 ಕನ್ನಡ ಜನಪ್ರಿಯ ಗಾದೆಗಳ ಸರಮಾಲೆ)

## ಇ-ಕಿರುಹೊತ್ತಿಗೆಯ ಬಿಡುಗಡೆ ಸಮಾರಂಭ




ಸೆಪ್ಟೆಂಬರ್ 5, 2021, ಶಿಕ್ಷಕರ ದಿನಾಚರಣೆಯಂದು, ಬೆಂಗಳೂರಿನ ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆಯ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಒಕ್ಕೂಟ 'ಪ್ರಗತಿ' ಯವರು ಹೊರತಂದ **'ಗಾದೆಗಳ ಗುಡಾಣ'** ಇ-ಪುಸ್ತಕವನ್ನು ಖ್ಯಾತ ಹಾಸ್ಯ ಲೇಖಕ ಶ್ರೀ ಎಂ ಎಸ್ ನರಸಿಂಹ ಮೂರ್ತಿಯವರು ಲೋಕಾರ್ಪಣೆ ಮಾಡಿದರು. ಈ ಶುಭಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಶ್ರೀ ಎಂ ವೆಂಕಟೇಶ ಶೇಷಾದ್ರಿ, ಅಧ್ಯಾಪಕ ಶ್ರೀ ವೆಂಕಟೇಶ್ ಬಾಬು ಮತ್ತು ರಾಷ್ಟ್ರೀಯ ರುಡ್ ಸೆಟ್ ಅಕಾಡೆಮಿಯ ಶ್ರೀ ಟಿ ಗಜೇಂದ್ರ, ಶ್ರೀ ಟಿ ಪಿ ಜಗದೀಶ್ ಮೂರ್ತಿ, ಶ್ರೀ ಕೆ ಆರ್ ಕಮಲಾಕರ್ ಮತ್ತು ಶ್ರೀ ಸುಬ್ರಮಣಿ ಉಪಸ್ಥಿತರಿದ್ದರು.

**ಸಂಗ್ರಹ**




**ಎಂ ವೆಂಕಟೇಶ ಶೇಷಾದ್ರಿ**
ನಿರ್ದೇಶಕರು,
ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆ,
ಬೆಂಗಳೂರು
ಮೊಬೈಲ್ : 9900158885



**ಕೆ ಜಿ ಸಂಪತ್ ಕುಮಾರ್**
ನಿವೃತ್ತ ಕೆನರಾ ಬ್ಯಾಂಕ್ ಅಧಿಕಾರಿ,
ಕಿರುತೆರೆ ಮತ್ತು ರಂಗಭೂಮಿ ಕಲಾವಿದರು
ಮತ್ತು ನಿರ್ದೇಶಕರು, ಬೆಂಗಳೂರು
ಮೊಬೈಲ್ : 9980503939

- ಅಂಕೆ ಇಲ್ಲದ ಕಪಿ ಲಂಕೆ ಸುಟ್ಟಿತು.
- ಅಂಗೈ ಹುಣ್ಣಿಗೆ ಕನ್ನಡಿ ಬೇಕೆ.
- ಅಂಗೈಯಲ್ಲಿ ಬೆಣ್ಣೆ ಇಟ್ಕೊಂಡು ಊರೆಲ್ಲಾ ತುಪ್ಪಕ್ಕೆ ಅಲೆದಾಡಿದರಂತೆ.
- ಅಂಬಲಿ ಕುಡಿಯುವವನಿಗೆ ಮೀಸೆ ಹಿಡಿಯುವವನೊಬ್ಬ.
- ಅಂಕೆ ಇಲ್ಲದ ಚತುರೆ, ಲಗಾಮು ಇಲ್ಲದ ಕುದುರೆ
- ಅಂಗೈ ತೋರಿಸಿ ಅವಲಕ್ಷಣ ಅಂತ ಅನ್ನಿಸಿಕೊಂಡರಂತೆ
- ಅಂಗೈಯಲ್ಲಿ ಅರಮನೆ ತೋರಿಸಿದ ಹಾಗೆ.
- ಅಂತೂ ಇಂತೂ ಕುಂತಿ ಮಕ್ಕಳಿಗೆ ರಾಜ್ಯವಿಲ್ಲ
- ಅಕಾಲದಲ್ಲಿ ಬೆಳೆಯಿದ್ದಂತೆ ವೃದ್ಧಾಪ್ಯದಲ್ಲಿ ಮಕ್ಕಳು.
- ಅಕ್ಕ ಸತ್ತರೆ ಅಮಾವಾಸ್ಯೆ ನಿಲ್ಲುತ್ತದೆಯೇ ?
- ಅಕ್ಕಸಾಲಿ ಅಕ್ಕನ ಚಿನ್ನಾನೂ ಬಿಡ
- ಅಕ್ಕಿ ಮೇಲೂ ಆಸೆ, ನೆಂಟರ ಮೇಲೂ ಪ್ರೀತಿ.
- ಅಜ್ಜಿ ನೂತದ್ದೆಲ್ಲಾ ಅಜ್ಜನ ಉಡಿದಾರಕ್ಕೆ.
- ಅಜ್ಜಿಗೆ ಅರಿವೆ ಚಿಂತೆ ಮೊಮ್ಮಗಳಿಗೆ ಮಿಂಡನ ಚಿಂತೆ
- ಅಟ್ಟ ಮೇಲೆ ಒಲೆ ಉರಿಯಿತು, ಕೆಟ್ಟ ಮೇಲೆ ಬುದ್ಧಿ ಬಂತು
- ಅಟ್ಟದ ಮೇಲಿಂದ ಬಿದ್ದವನಿಗೆ ಬಡಿಗೆ ತೊಗೊಡು ಹೇರಿದರಂತೆ.
- ಅಡಿಕೆಗೆ ಹೋದ ಮಾನ ಆನೆ ಕೊಟ್ಟರೂ ಬಾರದು.
- ಅಡುಗೆ ಮಾಡಿದವಳಿಗಿಂತ ಬಡಿಸಿದವಳೇ ಮೇಲು.
- ಅಡ್ಡಗೋಡೆಯ ಮೇಲೆ ದೀಪ ಇಟ್ಟ ಹಾಗೆ.
- ಅತಿ ಆಸೆ ಗತಿ ಕೇಡು.
- ಅತಿಯಾದರೆ ಅಮೃತವೂ ವಿಷವೇ.
- ಅತ್ತ ದರಿ, ಇತ್ತ ಪುಲಿ.
- ಅತ್ತೂ ಕರೆದೂ ಔತಣ ಮಾಡಿಸಿಕೊಂಡಂತೆ.

ಗಾದೆಗಳ ಗುಡಾಣ
(365 ಕನ್ನಡ ಜನಪ್ರಿಯ ಗಾದೆಗಳ ಸರಮಾಲೆ)

- ಅತ್ತೆ ಆಸ್ತೀನ ಅಳಿಯ ದಾನ ಮಾಡಿದ
- ಅತ್ತೆ ಮೇಲಿನ ಕೋಪವನ್ನು ಕೊತ್ತಿ ಮೇಲೆ ತೀರಿಸಿಕೊಂಡರಂತೆ...
- ಅತ್ತೆಗೊಂದು ಕಾಲ ಸೊಸೆಗೊಂದು ಕಾಲ.
- ಅನುಕೂಲ ಸಿಂಧು, ಅಭಾವ ವೈರಾಗ್ಯ.
- ಅನಿಷ್ಟಕ್ಕೆಲ್ಲಾ ಶನೀಶ್ವರ ಕಾರಣ
- ಅಪಕೀರ್ತಿ ತರುವ ಮಗನಿಗಿಂತ, ಸತ್ಕೀರ್ತಿ ತರುವ ಆಳೇ ಮೇಲು.
- ಅಪ್ಪ ಹಾಕಿದ ಆಲದ ಮರಕ್ಕೆ ನೇಣು ಹಾಕಿಕೊಂಡಂತೆ.
- ಅಯ್ಯೋ ಪಾಪ ಅಂದ್ರೆ ಅರ್ಧ ಆಯುಸ್ಸು
- ಅರವತ್ತಕ್ಕೆ ಅರಳು ಮರಳು.
- ಅರಿತರೆ ಮಾತನಾಡು, ಮರೆತರೆ ಕೂತು ನೋಡು.
- ಅಲ್ಪ ವಿದ್ಯಾ ಮಹಾಗರ್ವಿ
- ಅಲ್ಪನಿಗೆ ಐಶ್ವರ್ಯ ಬಂದರೆ ಅರ್ಧರಾತ್ರೀಲಿ ಕೊಡೆ ಹಿಡಿದನಂತೆ.
- ಅಲ್ಪರ ಸಂಗ ಅಭಿಮಾನ ಭಂಗ.
- ಅಶ್ವಥ ಸುತ್ತಿದರೆ ಮಕ್ಕಳಾಗುತ್ತೆ ಅಂದ್ರೆ ಸುತ್ತು ಸುತ್ತಿಗೂ ಹೊಟ್ಟೆ ಮುಟ್ಟಿ ನೋಡಿಕೊಂಡಳಂತೆ.
- ಅಹಂಕಾರಕ್ಕೆ ಉದಾಸೀನವೇ ಮದ್ದು.
- ಅಳಿಯ ಅಲ್ಲ, ಮಗಳ ಗಂಡ.
- ಅಳಿಯನ ಕುರುಡು ಬೆಳಗಾದರೆ ಗೊತ್ತಾಗತ್ತೆ.
- ಆಕಳು ಕಪ್ಪಾದರೆ ಹಾಲು ಕಪ್ಪೆ.
- ಆಕಾಶ ನೋಡೋದಕ್ಕೆ ನೂಕುನುಗ್ಗಲೇ ?
- ಆಕಾಶಕ್ಕೆ ಏಣಿ ಹಾಕಿದ ಹಾಗೆ.
- ಆಚಾರ್ಯರಿಗೆ ಮಂತ್ರಕ್ಕಿಂತ ಉಗುಳು ಜಾಸ್ತಿ
- ಆಟಕ್ಕುಂಟು,ಲೆಕ್ಕಕ್ಕಿಲ್ಲ.

- ಆಡಿಕೊಳ್ಳೋರ ಮುಂದೆ ಎಡವಿ ಬಿದ್ದ ಹಾಗೆ ?
- ಆಡು ಮುಟ್ಟದ ಸೊಪ್ಪಿಲ್ಲ ?
- ಆತುರಕ್ಕೆ ಅಜ್ಜಿ ಮೈನೆರೆದಳು ?
- ಆತುರಗಾರನಿಗೆ ಬುದ್ಧಿ ಮಟ್ಟ.
- ಆಪತ್ತಿಗಾದವನೇ ನೆಂಟ.
- ಆರಕ್ಕೆ ಏರಲಿಲ್ಲ ಮೂರಕ್ಕೆ ಇಳಿಯಲಿಲ್ಲ ?
- ಆರು ಕೊಟ್ಟರೆ ಅತ್ತೆ ಕಡೆ, ಮೂರು ಕೊಟ್ಟರೆ ಸೊಸೆ ಕಡೆ.
- ಇಕ್ಕಲಾರದ ಕೈ ಎಂಜಲು ಎಂದ ಹಾಗೆ.
- ಇಟ್ಟುಕೊಂಡವಳು ಇರೋ ತನಕ, ಕಟ್ಟಿಕೊಂಡವಳು ಕೊನೇ ತನಕ.
- ಇಡಿಯ ಮುಳುಗಿದವನಿಗೆ ಚಳಿಯೇನು? ಮಳೆಯೇನು?
- ಇದ್ದಿದ್ದು ಇದ್ದ ಹಾಗೆ ಹೇಳಿದ್ರೆ ಎದ್ದು ಬಂದು ಎದೆಗೆ ಒದ್ದನಂತೆ.
- ಇದ್ದೋರು ಮೂವರಲ್ಲಿ ಕದ್ದೋರು ಯಾರು ?
- ಇಬ್ಬರ ಜಗಳ ಮೂರನೆಯವನಿಗೆ ಲಾಭ.
- ಇರಲಾರದೆ ಇರುವೆ ಬಿಟ್ಟುಕೊಂಡ ಹಾಗೆ.
- ಇರುವೆಗೆ ಇರುವೆ ಮೈ ಭಾರ,ಆನೆಗೆ ಆನೆ ಮೈ ಭಾರ ?
- ಇರುಳು ಕಂಡ ಬಾವೀಲಿ ಹಗಲು ಬಿದ್ದರಂತೆ.
- ಇಲಿ ಬಂತು ಅಂದರೆ ಹುಲಿ ಬಂತು ಎಂದರು.
- ಇಷ್ಟನ್ನು ಕಂಡೆಯಾ ಕೃಷ್ಣಂಭಟ್ಟಾ ಅಂದರೆ,ಮುಪ್ಪಿನ ಕಾಲಕ್ಕೆ ಮೂರು ಜನ ಹೆಂಡಿರು ?
- ಈಚಲ ಮರದ ಕೆಲಗೆ ಕುಳಿತು ಮಜ್ಜಿಗೆ ಕುಡಿದ ಹಾಗೆ ?
- ಈಸಿ ನೋಡು , ಇದ್ದು ಜೈಸಿ ನೋಡು ?
- ಉಂಡೂ ಹೋದ, ಕೊಂಡೂ ಹೋದ.
- ಉಂಡರೆ ಉಬ್ಬಸ, ಹಸಿದರೆ ಸಂಕಟ .
- ಉಗುರಿನಲ್ಲಿ ಹೋಗೋ ಚಿಗುರಿಗೆ ಕೊಡಲಿ ಏಕೆ ?

- ಉಚ್ಚೆ ಕುಡಿದರೂ ತನ್ನಿಚ್ಚೇಲಿರಬೇಕು
- ಉಚ್ಚೇಲಿ ಮೀನು ಹಿಡಿಯೋ ಜಾತಿ.
- ಉಣ್ಣು ಬಾ ಅಂದ್ರೆ, ಇರಿ ಬಾ ಅಂದ್ರಂತೆ
- ಉತ್ತರನ ಪೌರುಷ ಎಲೆ ಮುಂದೆ.
- ಉತ್ತರಿ ಮಳೆ ಹುಯ್ದರೆ ಹೆತ್ತಮ್ಮನೂ ಆಗೋಲ್ಲ.
- ಉತ್ತರೆ ಹೊಲ ಚಂದ ಬಿತ್ತರೆ ಬೆಳೆ ಚಂದ
- ಉಪ್ಪ ತಿಂದ ಮೇಲೆ ನೀರು ಕುಡಿಯಲೇ ಬೆಕು
- ಉಪ್ಪಿಗಿಂತ ರುಚಿಯಿಲ್ಲ ತಾಯಿಗಿಂತ ದೇವರಿಲ್ಲ.
- ಉಪ್ಪು ತಿಂದ ಮನೆಗೆ ಎರಡು ಬಗೆಯ ಬೇಡ.
- ಉರಿಯೋ ಬೆಂಕಿಗೆ ತುಪ್ಪ ಸುರಿದ ಹಾಗೆ
- ಊಟ ತನ್ನಿಚ್ಚೆ, ನೋಟ ಪರರಿಚ್ಚೆ
- ಊಟ ಬಲ್ಲವನಿಗೆ ರೋಗವಿಲ್ಲ, ಮಾತು ಬಲ್ಲವನಿಗೆ ಜಗಳವಿಲ್ಲ
- ಊರಿಗೆ ಉಪಕಾರಿ, ಮನೆಗೆ ಮಾರಿ
- ಊರಿಗೆ ಊರ ಚಿಂತೆಯಾದರೆ ಅಜ್ಜಿಗೆ ಅರಿವೆ ಚಿಂತೆಯಂತೆ
- ಊರಿಗೆ ದೊರೆ ಆದರೂ ತಾಯಿಗೆ ಮಗನೆ.
- ಊರಿಗೆ ಬಂದವಳು ನೀರಿಗೆ ಬರದೆ ಇರುತ್ತಾಳೆಯೇ ?
- ಊರು ಅಂದ ಮೇಲೆ ಹೊಲಗೇರಿ ಇಲ್ಲದೆ ಇರುತ್ತದೆಯೇ?
- ಊರು ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಹಾಕಿದರಂತೆ.
- ಊರು ಸುಟ್ಟರೂ ಹನುಮಂತರಾಯ ಹೊರಗೆ.
- ಊರು ಹೋಗು ಅನ್ನುತ್ತೆ, ಕಾಡು ಬಾ ಅನ್ನುತ್ತೆ.
- ಎಂಜಲು ಕೈಯಲ್ಲಿ ಕಾಗೆ ಓಡಿಸದ ಬುದ್ಧಿ.
- ಎಂಟು ವರ್ಷಕ್ಕೆ ನನ್ನ ಮಗ ದಂಟು ಅಂದ.
- ಎಣ್ಣೆ ಬಂದಾಗ ಕಣ್ಣು ಮುಚ್ಚಿಕೊಂಡ ಹಾಗೆ
- ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದರಂತೆ.

- ಎತ್ತು ಈಯಿತು ಅಂದರೆ, ಕೊಟ್ಟಗೆಗೆ ಕಟ್ಟು ಎಂದರಂತೆ
- ಎತ್ತು ಏರಿಗೆಳೆಯಿತು, ಕೋಣ ನೀರಿಗೆಳೆಯಿತು.
- ಎಲೆ ಎತ್ತೋ ಜಾಣ ಅಂದರೆ ಉಂಡೋರೆಷ್ಟು ಮಂದಿ ಅಂದನಂತೆ.
- ಎಲ್ಲರ ಮನೆಯ ದೋಸೆಯೂ ತೂತೆ !
- ಎಲ್ಲಾ ಜಾಣ; ತುಸ ಕೋಣ
- ಐದು ಕುರುಡರು ಆನೆಯನ್ನು ಬಣ್ಣಿಸಿದ ಹಾಗೆ.
- ಐದು ಬೆರಳು ಒಂದೇ ಸಮ ಇರುವುದಿಲ್ಲ.
- ಒಂದು ಕಣ್ಣಿಗೆ ಬೆಣ್ಣೆ, ಇನ್ನೊಂದು ಕಣ್ಣಿಗೆ ಸುಣ್ಣ.
- ಒಂದು ಹೊತ್ತು ಉಂಡವ ಯೋಗಿ ಎರಡು ಹೊತ್ತು ಉಂಡವ ಭೋಗಿ ಮೂರು ಹೊತ್ತು ಉಂಡವ ರೋಗಿ ನಾಲ್ಕು ಹೊತ್ತು ಉಂಡವನ ಎತ್ತುಕೊಂಡು ಹೋಗಿ
- ಒಕ್ಕಣ್ಣನ ರಾಜ್ಯದಲ್ಲಿ ಒಂದು ಕಣ್ಣು ಮುಚ್ಚಿಕೊಂಡು ನಡಿ.
- ಒಗ್ಗಟ್ಟಿಲ್ಲದ ಊರಲ್ಲಿ ಒಪ್ಪತ್ತೂ ಇರಬೇಡ.
- ಒಲಿದರೆ ನಾರಿ ಮುನಿದರೆ ಮಾರಿ
- ಒಲ್ಲದ ಗಂಡನಿಗೆ ಮೊಸರಲ್ಲೂ ಕಲ್ಲು
- ಓದಿ ಓದಿ ಮರುಳಾದ ಕೂಚಂಭಟ್ಟ.
- ಓದುವಾಗ ಓದು, ಆಡುವಾಗ ಆಡು.
- ಕಂಕುಳಲ್ಲಿ ದೊಣ್ಣೆ, ಕೈಯಲ್ಲಿ ಶರಣಾರ್ತಿ.
- ಕಂತೆಗೆ ತಕ್ಕ ಬೊಂತೆ.
- ಕಂಕುಳಲ್ಲಿ ಮಗು ಇಟ್ಟುಕೊಂಡು ಊರೆಲ್ಲ ಹುಡುಕಿದರಂತೆ
- ಕಂಡದ್ದನ್ನು ಕಂಡಹಾಗೆ ಹೇಳಿದರೆ ಕೆಂಡದಂಥಾ ಕೋಪವಂತೆ
- ಕಂಡವರ ಮಕ್ಕಳನ್ನು ಬಾವಿಯಲ್ಲಿ ದೂಡಿ ಆಳ ನೋಡಿದ ಹಾಗೆ
- ಕಜ್ಜಿ ಹೋದರೂ ಕಡಿತ ಹೋಗಲಿಲ್ಲ.
- ಕಣ್ಣರಿಯದಿದ್ದರೂ ಕರುಳರಿಯುತ್ತದೆ.

- ಕತ್ತೆಗೇನು ಗೊತ್ತು ಕಸ್ತೂರಿ ಪರಿಮಳ.
- ಕದ್ದು ತಿಂದ ಹಣ್ಣು, ಪಕ್ಕದ ಮನೆ ಊಟ ಎಂದೂ ಹೆಚ್ಚು ರುಚಿ.
- ಕನ್ನಡಿ ಒಳಗಿನ ಗಂಟು ಕೈಗೆ ದಕ್ಕೀತೆ ?
- ಕಪ್ಪೆ ತಕ್ಕಡೀಲಿ ಹಾಕಿದ ಹಾಗೆ
- ಕಬ್ಬಿಣ ಕಾದಿರುವಾಗಲೇ ಬಡಿಯಬೇಕು
- ಕಬ್ಬು ಡೊಂಕಾದರೆ ಸಿಹಿ ಡೊಂಕೆ?
- ಕಳ್ಳನನ್ನು  ನಂಬಿದರೂ ಕುಳ್ಳನನ್ನು  ನಂಬಬೇಡ
- ಕಳ್ಳನ ಮನಸ್ಸು ಹುಳ್ಳ ಹುಳ್ಳಗೆ
- ಕಳ್ಳನ ಹೆಂಡತಿ ಎಂದಿದ್ದರೂ ಮುಂಡೆ
- ಕಾಮಾಲೆ ಕಣ್ಣಿನವನಿಗೆ ಲೋಕವೆಲ್ಲಾ ಹಳದಿಯಂತೆ
- ಕಾರ್ಯವಾಸಿ ಕತ್ತೆ ಕಾಲು ಕಟ್ಟು
- ಕಾಲಕ್ಕೆ ತಕ್ಕಂತೆ ನಡೆಯಬೇಕು, ತಾಳಕ್ಕೆ ತಕ್ಕಂತೆ ಕುಣಿಯಬೇಕು
- ಕಾಲಿನದು ಕಾಲಿಗೆ, ತಲೆಯದು ತಲೆಗೆ.
- ಕಾಸಿಗೆ ತಕ್ಕ ಕಜ್ಜಾಯ.
- ಕುಂಬಳಕಾಯಿ ಕಳ್ಳ ಅಂದರೆ ಹೆಗಲು ಮುಟ್ಟಿ ನೋಡಿಕೊಂಡನಂತೆ.
- ಕುಂಬಾರನಿಗೆ ವರುಷ, ದೊಣ್ಣೆಗೆ ನಿಮಿಷ.
- ಕುಂಟನಿಗೆ ಎಂಟು ಚೇಷ್ಟೆ, ಕುರುಡನಿಗೆ ನಾನಾಚೇಷ್ಟೆ
- ಕುಣಿಯಲಾರದವಳು ನೆಲ ಡೊಂಕು ಅಂದಳಂತೆ
- ಕುರಿ ಕಾಯೋದಕ್ಕೆ ತೋಳನನ್ನು ಕಳಿಸಿದ ಹಾಗೆ.
- ಕುರಿ ಕೊಬ್ಬಿದಷ್ಟು ಕುರುಬನಿಗೇ ಲಾಭ.
- ಕುರುಡರ ರಾಜ್ಯದಲ್ಲಿ ಒಕ್ಕಣ್ಣನೇ ರಾಜ.
- ಕೂತು ಉಣ್ಣೋನಿಗೆ ಕುಡಿಕೆ ಹೊನ್ನು ಸಾಲದು
- ಕೂಸು ಹುಟ್ಟುವ ಮೊದಲೇ ಕುಲಾವಿ ಹೊಲಿಸಿದರಂತೆ
- ಕೆಟ್ಟ ಮೇಲೆ ಬುದ್ಧಿ ಬಂತು, ಅಟ್ಟ ಮೇಲೆ ಒಲೆ ಉರಿಯಿತು

# SSLC/PUC/DEGREE



## ನಂತರ ಮುಂದೇನು ?

ನಿರುದ್ಯೋಗಿಗಳ ಬಾಳಲ್ಲಿ
ಆಶಾಕಿರಣ ಕೆನರಾ ಬ್ಯಾಂಕ್
ನಿಂದ
ಉಚಿತ ಕಂಪ್ಯೂಟರ್ ಶಿಕ್ಷಣ

**ನಿಮಗೆ ಕಂಪ್ಯೂಟರ್ ಶಿಕ್ಷಣದಲ್ಲಿ ಆಸಕ್ತಿಯಿದೆಯೇ? ಹಾಗಾದರೆ ನೀವು ಬೆಂಗಳೂರಿನ ಮಲ್ಲೇಶ್ವರಂ ನಲ್ಲಿರುವ ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆಯಲ್ಲಿ ಉಚಿತ ಕಂಪ್ಯೂಟರ್ ಶಿಕ್ಷಣವನ್ನು ಪಡೆಯಿರಿ.**




ವಿವರಗಳಿಗಾಗಿ ಸಂಪರ್ಕಿಸಿ :

ಎಂ ವೆಂಕಟೇಶ ಶೇಷಾದ್ರಿ ನಿರ್ದೇಶಕರು

**ಕೆನರಾ ಬ್ಯಾಂಕ್ ಮಾಹಿತಿ ತಂತ್ರಜ್ಞಾನ ತರಬೇತಿ ಸಂಸ್ಥೆ**

3ನೇ ಮಹಡಿ, ಚಿತ್ರಾಪುರ ಭವನ, 8ನೇ ಮುಖ್ಯ ರಸ್ತೆ, 15ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560 055

**ಫೋನ್: 080 23440036 /23463580**

- ಕೆಟ್ಟ ಕಾಲ ಬಂದಾಗ ಕಟ್ಟಿಕೊಂಡವಳೂ ಕೆಟ್ಟವಳು.
- ಕೆಟ್ಟು ಪಟ್ಟಣ ಸೇರು ಇಟ್ಟು ಹಳ್ಳಿ ಸೇರು
- ಕೆಲಸವಿಲ್ಲದ ಕುಂಬಾರ ಮಗನ ಮುಕಳಿ ತಟ್ಟಿದನಂತೆ.
- ಕೈ ಕೆಸರಾದರೆ ಬಾಯಿ ಮೊಸರು
- ಕೈ ತೋರಿಸಿ ಅವಲಕ್ಷಣ ಅನ್ನಿಸಿಕೊಂಡರಂತೆ
- ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ.
- ಕೈಗೆಟುಕದ ದ್ರಾಕ್ಷಿ ಹುಳಿ
- ಕೈಲಾಗದೋನು ಮೈ ಪರಚಿಕೊಂಡ
- ಕೊಂಕಣ ಸುತ್ತಿ ಮೈಲಾರಕ್ಕೆ ಬಂದ ಹಾಗೆ
- ಕೊಚ್ಚೆ ಮೇಲೆ ಕಲ್ಲು ಹಾಕಿದ ಹಾಗೆ.
- ಕೊಟ್ಟ ಹೆಣ್ಣು ಕುಲದಿಂದ ಹೊರಗೆ
- ಕೊಟ್ಟದ್ದು ತನಗೆ, ಬಚ್ಚಿಟ್ಟಿದ್ದು ಪರರಿಗೆ.
- ಕೊಟ್ಟೋನು ಕೋಡಂಗಿ, ಇಸ್ಕೊಂಡೋನು ಈರಭದ್ರ
- ಕೋಟಿ ವಿದ್ಯೆಗಿಂತ ಮೇಟಿ ವಿದ್ಯೆಯೇ ಮೇಲು.
- ಕೋಣನ ಮುಂದೆ ಕಿನ್ನರಿ ಬಾರಿಸಿದ ಹಾಗೆ.
- ಕೋತಿ ಕೈಯಲ್ಲಿ ಮಾಣಿಕ್ಯ ಕೊಟ್ಟ ಹಾಗೆ.
- ಕೋತಿ ತಾನು ಮೊಸರನ್ನ ತಿಂದು ಮೇಕೆ ಬಾಯಿಗೆ ಒರಸಿದ ಹಾಗೆ.
- ಕೋತಿಗೆ ಹೆಂಡ ಕುಡಿಸಿದ ಹಾಗೆ.
- ಕೋಪದಲ್ಲಿ ಕೊಯ್ದ ಮೂಗು ಶಾಂತವಾದ ಮೇಲೆ ಬರುವುದಿಲ್ಲ.
- ಗಂಡ ಹೆಂಡಿರ ಜಗಳ ಉಂಡು ಮಲಗೋ ತನಕ.
- ಗಂಡ ಹೆಂಡಿರ ಜಗಳದಲ್ಲಿ ಕೂಸು ಬಡವಾಯ್ತು.
- ಗಂಡಸಿಗೇಕೆ ಗೌರಿ ದುಃಖ ?
- ಗಡ್ಡಕ್ಕೆ ಬೆಂಕಿ ಹೊತ್ತಿದಾಗ ಬಾವಿ ತೋಡಕ್ಕೆ ಶುರು ಮಾಡಿದರಂತೆ.
- ಗಣೇಶನನ್ನು ಮಾಡಲು ಹೋಗಿ ಅವರಪ್ಪನನ್ನು ಮಾಡಿದನಂತೆ.

- ಗಾಜಿನ ಮನೆಯಲ್ಲಿರುವವರು ಅಕ್ಕ ಪಕ್ಕದ ಮನೆ ಮೇಲೆ ಕಲ್ಲೆಸೆಯಬಾರದು.
- ಗಾಯದ ಮೇಲೆ ಬರೆ ಎಳೆದ ಹಾಗೆ.
- ಗಾಳಿ ಗುದ್ದಿ ಮೈ ಕೈ ನೋಯಿಸಿಕೊಂಡಂತೆ
- ಗಾಳಿ ಬಂದಾಗ ತೂರಿಕೋ.
- ಗಿಡವಾಗಿ ಬಗ್ಗದ್ದು, ಮರವಾಗಿ ಬಗ್ಗೀತೇ?
- ಗಿಣಿ ಸಾಕಿ ಗಿಡುಗನ ಕೈಗೆ ಕೊಟ್ಟರಂತೆ.
- ಗುಡ್ಡ ಕಡಿದು, ಹಳ್ಳ ತುಂಬಿಸಿ, ನೆಲ ಸಮ ಮಾಡಿದ ಹಾಗೆ.
- ಗುಬ್ಬಿಯ ಮೇಲೆ ಬ್ರಹ್ಮಾಸ್ತ್ರ
- ಗೆದ್ದೆತ್ತಿನ ಬಾಲ ಹಿಡಿದ ಹಾಗೆ
- ಗೋರ್ಕಲ್ಲ ಮೇಲೆ ಮಳೆಗರೆದಂತೆ
- ಚಾಪೆ ಇರುವಷ್ಟಕ್ಕೆ ಕಾಲು ನೀಡಬೇಕು
- ಚಾಪೆ ಕೆಳಗೆ ಒಬ್ಬ ತೂರಿದರೆ ಇನ್ನೊಬ್ಬ ರಂಗೋಲಿ ಕೆಳಗೆ ತೂರಿದ
- ಚಿಂತೆ ಇಲ್ಲದವನಿಗೆ ಸಂತೆಯಲ್ಲೂ ನಿದ್ದೆ.
- ಚಿನ್ನದ ಸೂಜಿ ಅಂತ ಕಣ್ಣು ಚುಚ್ಚಿಕೊಂಡಾರೆ?
- ಚೇಳಿಗೆ ಪಾರುಪತ್ಯ ಕೊಟ್ಟ ಹಾಗೆ.
- ಜಟ್ಟಿ ಜಾರಿ ಬಿದ್ದರೂ ಮೀಸೆ ಮಣ್ಣಾಗಲಿಲ್ಲ
- ಜನ ಮರುಳೋ ಜಾತ್ರೆ ಮರುಳೋ.
- ಜಲ ನೋಡಿ ಬಾವಿ ತೆಗೀಬೇಕು, ಕುಲ ನೋಡಿ ಹೆಣ್ಣು ತರಬೇಕು.
- ಜಾಣನಿಗೆ ಮಾತಿನ ಪೆಟ್ಟು, ದಡ್ಡನಿಗೆ ದೊಣ್ಣೆ ಪೆಟ್ಟು.
- ತನಗೇ ಜಾಗವಿಲ್ಲ. ಕೊರಳಲ್ಲಿ ಡೋಲು ಬೇರೆ.
- ತನ್ನ ಓಣಿಯಲ್ಲಿ ನಾಯಿಯೂ ಸಿಂಹ.
- ತಮ್ಮ ಕೋಳಿ ಕೂಗಿದ್ದರಿಂದಲೇ ಬೆಳಗಾಯ್ತು ಎಂದುಕೊಂಡರು.
- ತಮ್ಮ ಮನೇಲಿ ಹೆಗ್ಗಣ ಸತ್ತಿದ್ದರೂ ಬೇರೆ ಮನೆಯ ಸತ್ತ ನೊಣದ ಕಡೆ ಬೆಟ್ಟು ಮಾಡಿದ ಹಾಗೆ.

- ತಾನು ಕಳ್ಳ ,ಪರರ ನಂಬ
- ತಾನು ಮಾಡುವುದು ಉತ್ತಮ, ಮಗ ಮಾಡುವುದು ಮಧ್ಯಮ, ಆಳು ಮಾಡುವುದು ಹಾಳು.
- ತಾನೂ ತಿನ್ನ, ಪರರಿಗೂ ಕೊಡ.
- ತಾನೊಂದೆಣಿಸಿದರೆ ದೈವವೊಂದೆಣಿಸಿತು
- ತಾಯಿಗಿಂತ ಬಂಧುವಿಲ್ಲ; ಉಪ್ಪಿಗಿಂತ ರುಚಿಯಿಲ್ಲ
- ತಾಯಿಯಂತೆ ಮಗಳು ನೂಲಿನಂತೆ ಸೀರೆ
- ತಾಳಕ್ಕೆ ತಕ್ಕ ಮೇಳ
- ತಾಳಿದವನು ಬಾಳಿಯಾನು
- ತುಂಬಿದ ಕೊಡ ತುಳುಕುವುದಿಲ್ಲ.
- ತೂಕಡಿಸುವವನಿಗೆ ಹಾಸಿಗೆ ಹಾಸಿ ಕೊಟ್ಟ ಹಾಗೆ
- ತೊಟ್ಟಿಲನ್ನು ತೂಗುವ ಕೈ ಜಗತ್ತನ್ನೇ ತೂಗಬಲ್ಲುದು
- ತೋಳ ಹಳ್ಳಕ್ಕೆ ಬಿದ್ದರೆ ಆಳಿಗೊಂದು ಕಲ್ಲು
- ದನ ತಿನ್ನುವವನಿಗೆ ಗೊಬ್ಬರದ ಆಣೆ
- ದಾಕ್ಷಿಣ್ಯಕ್ಕೆ ಬಸಿರಾಗೋದು
- ದೀಪದ ಕೆಳಗೆ ಯಾವತ್ತೂ ಕತ್ತಲೆ.
- ದುರ್ಭಿಕ್ಷದಲ್ಲಿ ಅಧಿಕ ಮಾಸ ಬಂದಂತೆ
- ದೂರದ ಬೆಟ್ಟ ಕಣ್ಣಿಗೆ ನುಣ್ಣಗೆ.
- ದೇವರು ವರ ಕೊಟ್ಟರೂ ಪೂಜಾರಿ ವರ ಕೊಡ
- ದೇಶ ಸುತ್ತು ; ಕೋಶ ಓದು.
- ಧರ್ಮಕ್ಕೆ ದಟ್ಟಿ ಕೊಟ್ಟರೆ ಹಿತ್ತಲಿಗೆ ಹೋಗಿ ಮೊಳ ಹಾಕಿದರು
- ನಗುವ ಹೆಂಗಸು, ಅಳುವ ಗಂಡಸು ಇಬ್ಬರನ್ನೂ ನಂಬಬಾರದು
- ನದೀನೆ ನೋಡದೆ ಇರುವನು ಸಮುದ್ರವರ್ಣನೆ ಮಾಡಿದ ಹಾಗೆ.
- ನಮ್ಮ ದೇವರ ಸತ್ಯ ನಮಗೆ ಗೊತ್ತಿಲ್ಲವೇ ?

- ಬಲ್ಲವನೇ ಬಲ್ಲ ಬೆಲ್ಲದ ರುಚಿಯ.
- ಬಲ್ಲವರ ಮಾತು ಬೆಲ್ಲ ಸವಿದಂತೆ.
- ಬಾಯಿ ಬಿಟ್ಟರೆ ಬಣ್ಣಗೇಡು.
- ಬಾಲ ಸುಟ್ಟ ಬೆಕ್ಕಿನ ಹಾಗೆ
- ಬಿದ್ದರೂ ಮೀಸೆ ಮಣ್ಣಾಗಲಿಲ್ಲ
- ಬಿರಿಯಾ ಉಂಡ ಬ್ರಾಹ್ಮಣ ಭಿಕ್ಷೆ ಬೇಡಿದ.
- ಬಿಸಿ ತುಪ್ಪ, ನುಂಗೋಕ್ಕೂ ಆಗೋಲ್ಲ, ಉಗುಳೋಕ್ಕೂ ಆಗೋಲ್ಲ.
- ಬಿಳಿ ಆನೆ ಸಾಕಿದ ಹಾಗೆ
- ಬೀದೀಲಿ ಹೋಗ್ತಿದ್ದ ಮಾರಿಯನ್ನು ಕರೆದು ಮನೆಗೆ ಸೇರಿಸಿಕೊಂಡಂತೆ.
- ಬೀಸೊ ದೊಣ್ಣೆ ತಪ್ಪಿಸಿ ಕೊಂಡರೆ ಸಾವಿರ ವರ್ಷ ಆಯಸ್ಸು.
- ಬೆಂಕಿಯಿಲ್ಲದೆ ಹೊಗೆಯಾಡುವುದಿಲ್ಲ.
- ಬೆಕ್ಕಿಗೆ ಚೆಲ್ಲಾಟ: ಇಲಿಗೆ ಪ್ರಾಣಸಂಕಟ
- ಬೆಕ್ಕು ಕಣ್ಣುಮುಚ್ಚಿ ಹಾಲು ಕುಡಿದ ಹಾಗೆ.
- ಬೆಟ್ಟ ಅಗೆದು ಇಲಿ ಹಿಡಿದಂತೆ
- ಬೆರಳು ತೋರಿಸಿದರೆ ಹಸ್ತ ನುಂಗಿದನಂತೆ.
- ಬೆಳೆಯುವ ಪೈರು ಮೊಳಕೆಯಲ್ಲಿ
- ಬೆಳ್ಳಗಿರೋದೆಲ್ಲ ಹಾಲಲ್ಲ, ಹೊಳೆಯೋದೆಲ್ಲ ಚಿನ್ನ ಅಲ್ಲ.
- ಬೇಲೀನೆ ಎದ್ದು ಹೊಲ ಮೇಯ್ದಂತೆ.
- ಬೊಗಳುವ ನಾಯಿ ಕಚ್ಚುವುದಿಲ್ಲ. ಕಚ್ಚೋ ನಾಯಿ ಬೊಗಳೊಲ್ಲ.
- ಭಂಗಿದೇವರಿಗೆ ಹೆಂಡುಕುಡುಕ ಪೂಜಾರಿ.
- ಭರಣಿ ಮಳೆ ಧರಣಿ ಬೆಳೆ.
- ಮಂತ್ರಕ್ಕಿಂತ ಉಗುಳೇ ಜಾಸ್ತಿ.
- ಮಂತ್ರಕ್ಕೆ ಮಾವಿನಕಾಯಿ ಉದುರತ್ಯೇ ?
- ಮಂಗ ಮೊಸರು ತಿಂದು ಮೇಕೆ ಬಾಯಿಗೆ ಸವರಿದ ಹಾಗಾಯಿತು.

- ಮಂಗನ ಕೈಗೆ ಮಾಣಿಕ್ಯ ಕೊಟ್ಟ ಹಾಗೆ
- ಮಕ್ಕಳಿಲ್ಲದ ಮನೆಯಲ್ಲಿ ಅಜ್ಜ ಅಂಬೆಗಾಲಿಟ್ಟ
- ಮಗೂನ ಚಿವುಟೋದು, ತೊಟ್ಟಿಲು ತೂಗೋದು
- ಮದುವೆ ಸಂಭ್ರಮದಲ್ಲಿ ತಾಳಿ ಕಟ್ಟುವುದನ್ನೇ ಮರೆತಂತೆ.
- ಮದುವೆಯಾಗೋ ಗುಂಡ ಅಂದರೆ ನೀನೇ ನನ್ನ ಹೆಂಡತಿಯಾಗು ಅಂದ ಹಾಗೆ
- ಮನಸಿದ್ದರೆ ಮಾರ್ಗ.
- ಮನೆ ಕಟ್ಟಿ ನೋಡು, ಮದುವೆ ಮಾಡಿ ನೋಡು.
- ಮನೆ ತುಂಬಾ ಮುತ್ತಿದ್ದರೆ ತಿಕಕ್ಕೂ ಪೋಣಿಸಿಕೊಂಡರಂತೆ.
- ಮನೆಗೆ ಬೆಂಕಿ ಬಿದ್ದಾಗ ಬಾವಿ ತೋಡಿದರಂತೆ
- ಮನೆಗೆ ಮಾರಿ, ಊರಿಗೆ ಉಪಕಾರಿ.
- ಮನೇಲಿ ಇಲಿ, ಬೀದೀಲಿ ಹುಲಿ.
- ಮಹಡಿ ಹತ್ತಿದ ಮೇಲೆ ಏಣಿ ಒದ್ದ ಹಾಗೆ.
- ಮಳ್ಳಿ ಮಳ್ಳಿ ಮಂಚಕ್ಕೆ ಎಷ್ಟು ಕಾಲು ಎಂದರೆ, ಮೂರು ಮತ್ತೊಂದು ಅಂದಳಂತೆ.
- ಮಾಡಬಾರದ್ದು ಮಾಡಿದರೆ, ಆಗಬಾರದ್ದು ಆಗತ್ತೆ
- ಮಾಡಿದೋರ ಪಾಪ ಆಡಿದೋರ ಬಾಯಲ್ಲಿ
- ಮಾಡಿದ್ದುಣ್ಣೋ ಮಹರಾಯ.
- ಮಾಡೋದೆಲ್ಲ ಅನಾಚಾರ, ಮನೆ ಮುಂದೆ ಬೃಂದಾವನ.
- ಮಾತು ಆಡಿದರೆ ಹೋಯಿತು; ಮುತ್ತು ಒಡೆದರೆ ಹೋಯಿತು.
- ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ.
- ಮಾತು ಮನೆ ಕೆಡಿಸಿತು; ತೂತು ಒಲೆ ಕೆಡಿಸಿತು.
- ಮಾತು ಬೆಳ್ಳಿ, ಮೌನ ಬಂಗಾರ.
- ಮಿಂಚಿಹೋದ ಕಾರ್ಯಕ್ಕೆ ಚಿಂತಿಸಿ ಫಲವೇನು ?

ಗಾದೆಗಳ ಗುಡಾಣ
(365 ಕನ್ನಡ ಜನಪ್ರಿಯ ಗಾದೆಗಳ ಸರಮಾಲೆ)

- ಮೀಸೆ ಬಂದವನು ದೇಶ ಕಾಣ.
- ಮುಖ ನೋಡಿ ಮಣೆ ಹಾಕು.
- ಮುಸುಕಿನೊಳಗೆ ಗುದ್ದಿಸಿಕೊಂಡಂತೆ.
- ಮುಳುಗುತ್ತಿರುವವನಿಗೆ ಹುಲ್ಲು ಕಡ್ಡಿಯೂ ಆಸರೆ.
- ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಬೇಕು.
- ಮೂಗಿಗಿಂತ ಮೂಗುತಿ ಭಾರ.
- ಮೂರು ಹೆತ್ತವಳು ಆರು ಹೆತ್ತವಳಿಗೆ ಬುದ್ಧಿ ಹೇಳಿದಂತೆ.
- ಮೂರೂ ಬಿಟ್ಟೋನು,ಊರಿಗೆ ದೊಡ್ಡೋನು.
- ಮೂರ್ತಿ ಚಿಕ್ಕದಾದ್ರು ಕೀರ್ತಿ ದೊಡ್ಡದು.
- ಮೇಲೆ ಬಿದ್ದ ಸೂಳೆ ಮೂರು ಕಾಸಿಗೂ ಬೇಡ.
- ಯಥಾ ರಾಜಾ ತಥಾ ಪ್ರಜಾ.
- ಯಾರದೋ ದುಡ್ಡು; ಎಲ್ಲಮ್ಮನ ಜಾತ್ರೆ.
- ಯುದ್ಧ ಕಾಲದಲ್ಲಿ ಶಸ್ತ್ರಾಭ್ಯಾಸ.
- ಯೋಗಿ ತಂದದ್ದು ಯೋಗಿಗೆ, ಭೋಗಿ ತಂದದ್ದು ಭೋಗಿಗೆ.
- ರವಿ ಕಾಣದ್ದನ್ನು ಕವಿ ಕಂಡ.
- ರಾಗ ನೆನೆಪಾದಾಗ ತಾಳ ಮರೆತು ಹೋಯಿತಂತೆ.
- ರಾತ್ರಿ ಎಲ್ಲ ರಾಮಾಯಣ ಕೇಳಿ, ಬೆಳಗಾಗೆದ್ದು ರಾಮಂಗೂ ಸೀತೆಗೂ ಏನು ಸಂಬಂಧ ಅಂದ್ರಂತೆ.
- ರಾಮೇಶ್ವರಕ್ಕೆ ಹೋದರೂ ಶನೇಶ್ವರನ ಕಾಟ ತಪ್ಪಲಿಲ್ಲ.
- ರಾವಣನ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆ
- ರೇಶ್ಮೆ ಶಾಲಿನಲ್ಲಿ ಸುತ್ತಿದ ಚಪ್ಪಲಿ ಏಟು.
- ರೊಕ್ಕ ಕೊಟ್ಟು ರಟ್ಟೆ ಮುರಿಸಿಕೊಂಡಂತೆ.
- ರೊಟ್ಟಿ ಜಾರಿ ತುಪ್ಪಕ್ಕೆ ಬಿದ್ದಂತೆ
- ರೋಗಿ ಬಯಸಿದ್ದು ಹಾಲು ಅನ್ನ ವೈದ್ಯರು ಹೇಳಿದ್ದು ಹಾಲು ಅನ್ನ

- ವಿನಾಶ ಕಾಲೇ ವಿಪರೀತ ಬುದ್ಧಿ
- ವಿರೂಪಾಕ್ಷ ಹಂಪೆ ಬಿಡ, ವಿಘ್ನೇಶ್ವರ ಕೊಂಪೆ ಬಿಡ.
- ವೇದ ಸುಳ್ಳಾದರು ಗಾದೆ ಸುಳ್ಳಾಗದು.
- ವೈದ್ಯರ ಹತ್ತಿರ, ವಕೀಲರ ಹತ್ತಿರ ಸುಳ್ಳು ಹೇಳಬೇಡ
- ಶಂಖದಿಂದ ಬಂದರೇನೇ ತೀರ್ಥ.
- ಶರಣರ ಬದುಕು ಅವರ ಮರಣದಲ್ಲಿ ನೋಡು.
- ಶಿವಪೂಜೇಲಿ ಕರಡಿ ಬಿಟ್ಟ ಹಾಗೆ.
- ಸಂಕಟ ಬಂದಾಗ ವೆಂಕಟರಮಣ.
- ಸಂಸಾರ ಗುಟ್ಟು, ವ್ಯಾಧಿ ರಟ್ಟು.
- ಸಗಣಿಯವನ ಸ್ನೇಹಕ್ಕಿಂತ ಗಂಧದವನ ಜೊತೆ ಗುದ್ದಾಟ ಮೇಲು.
- ಸಜ್ಜನರ ಸಂಗ ಹೆಜ್ಜೇನು ಸವಿದಂತೆ
- ಸಣ್ಣವರ ನೆರಳು ಉದ್ದವಾದಾಗ ಸೂರ್ಯನಿಗೂ ಮುಳುಗುವ ಕಾಲ.
- ಸತ್ಯಕ್ಕೆ ಸಾವಿಲ್ಲ, ಸುಳ್ಳಿಗೆ ಸುಖವಿಲ್ಲ.
- ಸದಾಶಿವಂಗೆ ಅದೇ ಧ್ಯಾನ.
- ಸಹವಾಸ ದೋಷದಿಂದ ಸನ್ಯಾಸಿ ಕೆಟ್ಟ
- ಸಾಲ ಕೊಳ್ಳುವಾಗ ಹಾಲು ಕುಡಿದಂತೆ, ಸಾಲ ತಿರುಗಿ ಕೊಡುವಾಗ ಕಿಬ್ಬದಿ ಕೀಲು ಮುರಿದಂತೆ
- ಸಾವಿರ ಸುಳ್ಳು ಹೇಳಿ ಒಂದು ಮದುವೆ ಮಾಡು.
- ಸೀರೆ ಗಂಟು ಬಿಚ್ಚೋವಾಗ ದಾರದ ನಂಟು ಯಾರಿಗೆ ಬೇಕು.
- ಸುಂಕದೋನ ಹತ್ರ ಸುಖದುಃಖ ಹೇಳಿಕೊಂಡ ಹಾಗೆ
- ಸುಡುಗಾಡಿನಲ್ಲಿ ಕುಳಿತು ಸುಖ ಬಯಸಿದಂತೆ.
- ಸೊಕ್ಕಿದ್ದವನಿಗೆ ಯಾಣ, ರೊಕ್ಕಿದ್ದವನಿಗೆ ಪಟ್ಟಣ.
- ಹಂಗಿನ ಅರಮನೆಗಿಂತ ಗುಡಿಸಲೇ ಮೇಲು.
- ಹಣ ಅಂದ್ರೆ ಹೆಣವೂ ಬಾಯಿ ಬಿಡ್ತದೆ

- ಹಣ್ಣೆಲೆ ಉದುರುವಾಗ ಚಿಗುರೆಲೆ ನಗುತಿತ್ತು
- ಹತ್ತಾರು ಜನ ಓಡಾಡೋ ಕಡೇಲಿ ಹುಲ್ಲು ಬೆಳೆಯೋಲ್ಲ.
- ಹನಿ ಹನಿ ಸೇರಿದರೆ ಹಳ್ಳ, ತೆನೆ ತೆನೆ ಸೇರಿದರೆ ಬಳ್ಳ.
- ಹನುಮಂತನೇ ಹಗ್ಗ ತಿನ್ನುವಾಗ ಪೂಜಾರಿಗೆ ಶ್ಯಾವಿಗೆ ಬೇಕಂತೆ
- ಹಲವು ದೇವರ ಮಾಡಿ ಹಾರುವಯ್ಯ ಕೆಟ್ಟ
- ಹಲ್ಲಿದ್ದವನಿಗೆ ಕಡಲೆ ಇಲ್ಲ, ಕಡಲೆಯಿದ್ದವನಿಗೆ ಹಲ್ಲಿಲ್ಲ.
- ಹಸಿ ಗೋಡೆ ಮೇಲೆ ಹರಳು ಎಸೆದಂತೆ.
- ಹಸಿದು ಹಲಸಿನ ಹಣ್ಣು ತಿನ್ನು ಉಂಡು ಮಾವಿನ ಹಣ್ಣು ತಿನ್ನು
- ಹಳೇ ಗಂಡನ ಪಾದವೇ ಗತಿ
- ಹಾಗಲಕಾಯಿಗೆ ಬೇವಿನಕಾಯಿ ಸಾಕ್ಷಿ.
- ಹಾಡಿದ್ದೇ ಹಾಡೋ ಕಿಸುಬಾಯಿ ದಾಸ.
- ಹಾಡ್ತಾ ಹಾಡ್ತಾ ರಾಗ , ನರಳ್ತಾ ನರಳ್ತಾ ರೋಗ
- ಹಾಲು ಕುಡಿದ ಮಕ್ಕಳೇ ಬದುಕಲಿಲ್ಲ, ವಿಷ ಕುಡಿದ ಮಕ್ಕಳು ಬದುಕುತ್ತಾರಾ?
- ಹಾವೂ ಸಾಯಬೇಕು, ಕೋಲೂ ಮುರಿಯಬಾರದು.
- ಹಾಸಿಗೆ ಇದ್ದಷ್ಟು ಕಾಲು ಚಾಚು.
- ಹಾಳೂರಿಗೆ ಉಳಿದವನೇ ಗೌಡ
- ಹಿಟ್ಟೂ ಹಳಸಿತ್ತು ನಾಯಿಯೂ ಹಸಿದಿತ್ತು
- ಹಿತ್ತಲ ಗಿಡ ಮದ್ದಲ್ಲ.
- ಹಿರಿಯಕ್ಕನ ಚಾಳಿ ಮನೆಮಂದಿಗೆಲ್ಲ
- ಹೀನ ಸುಳಿ ಬೋಳಿಸಿದರೂ ಹೋಗೋಲ್ಲ.
- ಹುಚ್ಚಲ್ಲ,ಬೆಪ್ಪಲ್ಲ,ಶಿವಲೀಲೆ
- ಹುಚ್ಚು ಬಿಟ್ಟ ಹೊರತು ಮದುವೆ ಆಗೋಲ್ಲ; ಮದುವೆ ಆದ ಹೊರತು ಹುಚ್ಚು ಬಿಡಲ್ಲ
- ಹುಚ್ಚುಮುಂಡೆ ಮದುವೇಲಿ ಉಂಡವನೇ ಜಾಣ.

- ಹುಟ್ಟಿಸಿದ ದೇವರು ಹುಲ್ಲು ಮೇಯಿಸದೇ ಇರುವನೇ ?
- ಹುಟ್ಟು ಗುಣ ಸುಟ್ಟರೂ ಹೋಗೋದಿಲ್ಲ
- ಹುಟ್ಟುತ್ತಾ ಹುಟ್ಟುತ್ತಾ ಅಣ್ಣ ತಮ್ಮಂದಿರು, ಬೆಳಿತಾ ಬೆಳಿತಾ ದಾಯಾದಿಗಳು.
- ಹುಣಿಸೆ ಮುಪ್ಪಾದರೂ ಹುಳಿ ಮುಪ್ಪೇ ?
- ಹುಣ್ಣಿನ ಮೇಲೆ ಉಪ್ಪು ಸವರಿದಂತೆ
- ಹುಲ್ಲಿನ ಬಣವೇಲಿ ಸೂಜಿ ಹುಡುಕಿದ ಹಾಗೆ.
- ಹೂವಿನಿಂದ ನಾರಿಗೂ ಸ್ವರ್ಗ
- ಹೆಣ್ಣಿಗೆ ಹಟವಿರಬಾರದು, ಗಂಡಿಗೆ ಚಟವಿರಬಾರದು.
- ಹೆತ್ತೋರ್ಗೆ ಹೆಗ್ಗಣ ಮುದ್ದು, ಕಟ್ಗೊಂಡೋರ್ಗೆ ಕೋಡಂಗಿ ಮುದ್ದು.
- ಹೆದರುವವರ ಮೇಲೆ ಕಪ್ಪೆ ಎಸೆದರಂತೆ.
- ಹೇಳೋದು ಶಾಸ್ತ್ರ,ತಿನ್ನೋದು ಬದನೆಕಾಯಿ
- ಹೇಳೋರು ಹೆಡ್ಡರಾದರೆ ,ಕೇಳೋರು ಕಿವುಡರೇ?
- ಹೊಟ್ಟೆ ತುಂಬಿದ ಮೇಲೆ ಕಜ್ಜಾಯವೂ ವಿಷ
- ಹೊಟ್ಟೆಗೆ ಹಿಟ್ಟಿಲ್ಲ, ಜುಟ್ಟಿಗೆ ಮಲ್ಲಿಗೆ ಹೂವು.
- ಹೊತ್ತಿಗಿಲ್ಲದ ಗಾದೆ, ಊಟಕ್ಕಿಲ್ಲದ ಉಪ್ಪಿನಕಾಯಿಯಂತೆ.
- ಹೊರಗೆ ಥಳಕು ಒಳಗೆ ಹುಳಕು.
- ಹೊಸ ವೈದ್ಯನಿಗಿಂತ ಹಳೆ ರೋಗಿಯೇ ಮೇಲು
- ಹೊಳೆ ನೀರಿಗೆ ದೊಣೆನಾಯ್ಕನ ಅಪ್ಪಣೆ ಏಕೆ ?
- ಹೊಳೆಯಲ್ಲಿ ಹುಣಿಸೇ ಹಣ್ಣು ಕಿವಿಚಿದಂತೆ
- ಹೋದೆಯಾ ಪಿಶಾಚಿ ಅಂದರೆ ಬಂದೆ ಗವಾಕ್ಷೀಲಿ ಅಂದಂತೆ
- ಹೌದಪ್ಪನ ಚಾವಡಿಯಲ್ಲಿ ಅಲ್ಲಪ್ಪನನ್ನು ಕೇಳುವವರಾರು.